ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1622
ಸದಸ್ಯರ ಹೆಸರು	:	ಶ್ರೀ. ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.
ಉತ್ತರಿಸುವ ದಿನಾಂಕ	:	11.03.2022.

ಕ್ರ ಸಂ.	ಪ್ರಶ್ನೆ	ಉತ್ತರ
1.	ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ಎಲೆ ಹಳದಿ ರೋಗ ಹಾವಳಿಯಿಂದ ರೈತರಿಗೆ ನಷ್ಟ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;	ಸರ್ಕಾರದ ಗಮನದಲ್ಲಿದೆ. ರೋಗದ ನಿಯಂತ್ರಣಕ್ಕೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 1.ಅಡಿಕೆ ಹಳದಿ ಎಲೆ ರೋಗದ ನಿಯಂತ್ರಣಕ್ಕೆ ತಾಂತ್ರಿಕ ಮಾರ್ಗಸೂಚಿಯನ್ನು ಜಾರಿಗೊಳಿಸಿ ಕೆಳಗಿನ ಮಾಹಿತಿ ಬಗ್ಗೆ ರೈತರಿಗೆ ತಿಳುವಳಿಕೆ ನೀಡಲಾಗಿದೆ. • ಅಡಿಕೆ ಬೆಳೆಗೆ ತಗಲುವ ವಿವಿಧ ರೋಗ ಮತ್ತು ಕೀಟಗಳ ನಿಯಂತ್ರಣ ಕ್ರಮಗಳ ಬಗ್ಗೆ ರೈತರಲ್ಲಿ ಜಾಗೃತಿ. • ಸರಿಯಾದ ಮಣ್ಣಿನ ಮತ್ತು ಪೋಷಕಾಂಶಗಳ ನಿರ್ವಹಣೆಯಿಂದ ರೋಗವನ್ನು ತಡೆಗಟ್ಟುವುದು. • ರೋಗ ಬಾಧಿತ ಪ್ರದೇಶಗಳಲ್ಲಿ ಬಹುಬೆಳೆ ಪದ್ಧತಿಯನ್ನು ಅನುಸರಿಸಲು ಹೆಚ್ಚಿನ ಒತ್ತು ನೀಡುವುದು. • ಅಡಿಕೆ ಬೆಳೆಗೆ ಅವಶ್ಯವಿರುವ ಸಾವಯವ ಗೊಬ್ಬರ, ರಾಸಾಯನಿಕ ಗೊಬ್ಬರ, ಸೂಕ್ಷ್ಮ ಪೋಷಕಾಂಶಗಳು ಹಾಗೂ ಸುಣ್ಣ, ಹಾಗೂ ಸಸ್ಯ ಸಂರಕ್ಷಣಾ ಔಷಧಿಗಳನ್ನು ಬಳಸುವುದು. • ಅಡಿಕೆ ಹಳದಿ ಎಲೆ ರೋಗ ಬಾಧಿತ ತೋಟಗಳಲ್ಲಿ ಉತ್ತಮ ನೀರು ಮತ್ತು ಪೋಷಕಾಂಶ ನಿರ್ವಹಣೆಗಾಗಿ ಪ್ಲಾಸ್ಟಿಕ್ ಹೊದಿಕೆಯನ್ನು ಅಳವಡಿಸುವುದು. • ಅಡಿಕೆ ತೋಟಗಳ ನಿರ್ವಹಣೆಯಲ್ಲಿ ಜೈವಿಕ ನಿಯಂತ್ರಕಗಳ ಉಪಚರಣೆ (Trichoderma harzianum, Bacillus megaterium, Pseudomonas fluorescens), ನೀರು ಮತ್ತು ಪೋಷಕಾಂಶಗಳ ನಿರ್ವಹಣೆ (Drip Irrigation with Fertigation + Organic manures) ಹಾಗೂ

		ಅಗತ್ಯಕ್ಕನುಗುಣವಾದ ಲಘು ಪೋಷಕಾಂಶಗಳ ನಿರ್ವಹಣೆ ಕೈಗೊಳ್ಳುವುದು. • ಅಡಿಕೆ ಹಳದಿ ಎಲೆ ರೋಗಬಾಧೆ ತೀವ್ರವಾಗಿರುವ ತೋಟಗಳಲ್ಲಿ ಅಂತಹ ಮರಗಳನ್ನು ತೆಗೆದು ಪರ್ಯಾಯ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿಕಾಯಿ, ಬೆಣ್ಣೆಹಣ್ಣು, ರಾಂಬೂಟಾನ್, ಲಿಚ್ಚಿಹಣ್ಣು, ದಾಲ್ಚಿನ್ನಿ, ಲವಂಗ, ತಾಳೆಬೆಳೆ ಹಾಗೂ ಇತರೆ ಬೆಳೆಗಳನ್ನು ಬೆಳೆಯುವುದು. 2.ರಾಜ್ಯವಲಯ ಯೋಜನೆಯಾದ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಅಡಿಕೆ ಬೆಳೆಗೆ ಸೇರಿದಂತೆ ಸಸ್ಯ ಸಂರಕ್ಷಣೆ ಔಷಧಿ ಖರೀದಿಗೆ ಸಾಮಾನ್ಯ ವರ್ಗದವರಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಶೇ.90ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ. 3.ಕೇಂದ್ರವಲಯ ಯೋಜನೆಯಾದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ಸಮಗ್ರ ಕೀಟ ಮತ್ತು ರೋಗಗಳ ನಿಯಂತ್ರಣ ಕೈಗೊಳ್ಳಲು ರೈತರಿಗೆ ಶೇ.30ರಷ್ಟು ಸಹಾಯಧನ ನೀಡಲಾಗುತ್ತಿದೆ.
2.	ಬೆಳೆ ಪರಿಹಾರಕ್ಕೆ ಈಗಾಗಲೇ ರಾಜ್ಯ ಸರ್ಕಾರವು ಬಿಡುಗಡೆಗೊಳಿಸಿದ "ಪ್ಯಾಕೇಜ್" ಅನ್ನು ಬೇರೆಯಾವುದೇ ಉದ್ದೇಶಕ್ಕೆ ಬಳಸದಂತೆ ಕ್ರಮವಹಿಸಲಾಗಿದೆಯೇ?	2021-22 ನೇ ಸಾಲಿನ ಆಯವ್ಯಯ ಭಾಷಣದ 59ನೇ ಕಂಡಿಕೆಯನ್ವಯ ಅಡಿಕೆ ಬೆಳೆಗಾರರನ್ನು ತೀವ್ರವಾಗಿ ಬಾಧಿಸುತ್ತಿರುವ ಹಳದಿ ಎಲೆ ರೋಗದ ಕುರಿತ ಸಂಶೋಧನೆ ತೀವ್ರಗೊಳಿಸಲು ಹಾಗೂ ಪರ್ಯಾಯ ಬೆಳೆಯನ್ನು ಪ್ರೋತ್ಸಾಹಿಸಲು ರೂ.25.00 ಕೋಟಿಗಳ ಕಾರ್ಯಕ್ರಮವನ್ನು ಘೋಷಿಸಿದ್ದು, ಈ ಅನ್ವಯ 3 ವರ್ಷಗಳ ಅವಧಿಗೆ ಕಾರ್ಯಕ್ರಮ ರೂಪಿಸಲಾಗಿದೆ. ಈ ಅನುದಾನವನ್ನು ಇದೇ ಉದ್ದೇಶಕ್ಕೆ ಬಳಸಲಾಗುವುದು. ಬೆಳೆ ಪರಿಹಾರಕ್ಕೆ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ.

HORTI 144 HGM 2022

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು